Akashvani : Bangalore
National Bulletin In Kannada
26.07.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
26.07.2024 / 19.35 hrs

<u>ಮುಖ್ಯಾಂಶಗಳು</u>

- ೨೦೨೭ರ ವೇಳೆಗೆ ೨೫ ಸಾವಿರ ಪ್ರಧಾನಮಂತ್ರಿ ಭಾರತೀಯ ಜನೌಷಧ ಕೇಂದ್ರ ತೆರೆಯುವ ಗುರಿ
- ನವದೆಹಲಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನೀತಿ ಆಯೋಗದ ಸಭೆ
- ರಾಜ್ಯಸಭೆಯ ಶೂನ್ಯ ವೇಳೆಯಲ್ಲಿ ವಾಲ್ಮೀಕಿ ಹಗರಣ ಪ್ರಸ್ತಾಪ; ಸಮಗ್ರ ತನಿಖೆಗೆ ಈರಣ್ಣ ಕಡಾಡಿ ಆಗ್ರಹ
- ಮಹಿಳಾ ಏಷ್ಯಾಕಪ್ ಟಿ-೨೦ ಕ್ರಿಕೆಟ್; ಫೈನಲ್ ಪ್ರವೇಶಿಸಿದ ಭಾರತ
- ಪ್ಯಾರೀಸ್ ಒಲಿಂಪಿಕ್ಸ್ ಉದ್ಘಾಟನಾ ಸಮಾರಂಭಕ್ಕೆ ಕ್ಷಣಗಣನೆ ಭಾರತದ ಕ್ರೀಡಾಪಟುಗಳಿಗೆ ಗಣ್ಯರಿಂದ ಶುಭ ಹಾರೈಕೆ

<><*<><>*><>

೨೦೨೭ ರ ಮಾರ್ಚ್ ೩೧ ರೊಳಗೆ ದೇಶದಾದ್ಯಂತ ೨೫ ಸಾವಿರ ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳನ್ನು ತೆರೆಯುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ. ಲೋಕಸಭೆಯಲ್ಲಿಂದು ರಾಸಾಯನಿಕ ಮತ್ತು ರಸಗೊಬ್ಬರಗಳ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಮುಟ್ಟಿನ ರಜೆ ಕಡ್ಡಾಯಗೊಳಿಸುವ ಯಾವುದೇ ಪ್ರಸ್ತಾವನೆ ಕೇಂದ್ರ ಸರ್ಕಾರದ ಮುಂದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಲೋಕಸಭೆಯಲ್ಲಿ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಮುಟ್ಟಿನ ನೈರ್ಮಲ್ಯವನ್ನು ಉತ್ತೇಜಿಸುವ ಯೋಜನೆಯಡಿ ನ್ಯಾಪ್‌ಕಿನ್‌ಗಳನ್ನು ಆಶಾ ಕಾರ್ಯಕರ್ತೆಯರ ಮೂಲಕ ರಿಯಾಯಿತಿ ದರ ದರದಲ್ಲಿ ನೀಡಲಾಗುತ್ತದೆ ಎಂದು ಹೇಳಿದ್ದಾರೆ. ೨೦೧೮ ರಿಂದ ನೇಮಕಗೊಂಡ ೬೬೧ ಹೈಕೋರ್ಟ್ ನ್ಯಾಯಮೂರ್ತಿಗಳ ಪೈಕಿ ೨೧ ಮಂದಿ ಪರಿಶಿಷ್ಟ ಜಾತಿ, ೧೨ ಮಂದಿ ಪರಿಶಿಷ್ಟ ಪಂಗಡಕ್ಕೆ ಸೇರಿದ್ದು, ೭೮ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ್ದಾರೆ ಎಂದು ಕಾನೂನು ಸಚಿವ ಅರ್ಜುನ್‌ರಾಮ್ ಮೇಘವಾಲ್ ಲೋಕಸಭೆಗೆ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಸುಪ್ರಿಂಕೋರ್ಟ್ ಮತ್ತು ಹೈಕೋರ್ಟ್‌ಗಳಿಗೆ ನ್ಯಾಯಮೂರ್ತಿಗಳ ನೇಮಕಾತಿಯನ್ನು ಸಂವಿಧಾನದ ಅಡಿಯಲ್ಲಿ ಮಾಡಲಾಗುತ್ತಿದ್ದು, ಇದು ಯಾವುದೇ ಜಾತಿ ಅಥವಾ ಯಾವುದೇ ವರ್ಗದ ವ್ಯಕ್ತಿಗಳಿಗೆ ಮೀಸಲಾತಿ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ರಷ್ಯಾದಲ್ಲಿ ಉದ್ಯೋಗಾವಕಾಶ ಹುಡುಕುವಾಗ ಭಾರತೀಯರು ಸೂಕ್ತ ಎಚ್ಚರಿಕೆ ವಹಿಸುವಂತೆ ವಿದೇಶಾಂಗ ಸಚಿವಾಲಯ ತಿಳಿಸಿದೆ ಎಂದು ಲೋಕಸಭೆಯಲ್ಲಿ ವಿದೇಶಾಂಗ ಸಚಿವಾಲಯದ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಮಾಹಿತಿ ನೀಡಿದ್ದಾರೆ.

<><*<><>*><>

೨೦೨೭ ರ ಮಾರ್ಚ್ ೩೧ ರೊಳಗೆ ದೇಶದಾದ್ಯಂತ ೨೫ ಸಾವಿರ ಪ್ರಧಾನ ಮಂತ್ರಿ ಭಾರತೀಯ ಜನೌಷಧಿ ಕೇಂದ್ರಗಳನ್ನು ತೆರೆಯುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ. ಲೋಕಸಭೆಯಲ್ಲಿಂದು ರಾಸಾಯನಿಕ ಮತ್ತು ರಸಗೊಬ್ಬರಗಳ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಮುಟ್ಟಿನ ರಜೆ ಕಡ್ಡಾಯಗೊಳಿಸುವ ಯಾವುದೇ ಪ್ರಸ್ತಾವನೆ ಕೇಂದ್ರ ಸರ್ಕಾರದ ಮುಂದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಲೋಕಸಭೆಯಲ್ಲಿ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಮುಟ್ಟಿನ ನೈರ್ಮಲ್ಯವನ್ನು ಉತ್ತೇಜಿಸುವ ಯೋಜನೆಯಡಿ ನ್ಯಾಪ್‌ಕಿನ್‌ಗಳನ್ನು ಆಶಾ ಕಾರ್ಯಕರ್ತೆಯರ ಮೂಲಕ ರಿಯಾಯಿತಿ ದರ ದರದಲ್ಲಿ ನೀಡಲಾಗುತ್ತದೆ ಎಂದು ಹೇಳಿದ್ದಾರೆ. ೨೦೧೮ ರಿಂದ ನೇಮಕಗೊಂಡ ೬೬೧ ಹೈಕೋರ್ಟ್ ನ್ಯಾಯಮೂರ್ತಿಗಳ ಪೈಕಿ ೨೧ ಮಂದಿ ಪರಿಶಿಷ್ಟ ಜಾತಿ, ೧೨ ಮಂದಿ ಪರಿಶಿಷ್ಟ ಪಂಗಡಕ್ಕೆ ಸೇರಿದ್ದು, ೭೮ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ್ದಾರೆ ಎಂದು ಕಾನೂನು ಸಚಿವ ಅರ್ಜುನ್‌ರಾಮ್ ಮೇಘವಾಲ್ ಲೋಕಸಭೆಗೆ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಸುಪ್ರಿಂಕೋರ್ಟ್ ಮತ್ತು ಹೈಕೋರ್ಟ್‌ಗಳಿಗೆ ನ್ಯಾಯಮೂರ್ತಿಗಳ ನೇಮಕಾತಿಯನ್ನು ಸಂವಿಧಾನದ ಅಡಿಯಲ್ಲಿ ಮಾಡಲಾಗುತ್ತಿದ್ದು, ಇದು ಯಾವುದೇ ಜಾತಿ ಅಥವಾ ಯಾವುದೇ ವರ್ಗದ ವ್ಯಕ್ತಿಗಳಿಗೆ ಮೀಸಲಾತಿ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ರಷ್ಯಾದಲ್ಲಿ ಉದ್ಯೋಗಾವಕಾಶ ಹುಡುಕುವಾಗ ಭಾರತೀಯರು ಸೂಕ್ತ ಎಚ್ಚರಿಕೆ ವಹಿಸುವಂತೆ ವಿದೇಶಾಂಗ ಸಚಿವಾಲಯ ತಿಳಿಸಿದೆ ಎಂದು ಲೋಕಸಭೆಯಲ್ಲಿ ವಿದೇಶಾಂಗ ಸಚಿವಾಲಯದ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಮಾಹಿತಿ ನೀಡಿದ್ದಾರೆ.

<><*<><>*><>

ರೈತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ಆಹಾರದ ಮೇಲಿನ ಕನಿಷ್ಠ ಬೆಂಬಲ ಬೆಲೆಯನ್ನು ಹೆಚ್ಚಿಸುತ್ತಲೇ ಬಂದಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿ ಎಂಎಸ್‌ಪಿಗೆ ಕಾನೂನು ಖಾತರಿ ನೀಡುವ ಸಂಬಂಧದ ಪ್ರಶ್ನೆಗೆ ಉತ್ತರಿಸಿದ ಅವರು ೨೦೧೩ ರಲ್ಲಿ ಕನಿಷ್ಟ ಬೆಂಬಲ ಬೆಲೆಯನ್ನು ಒಂದು ಸಾವಿರದ ೨೫೦ ರೂಪಾಯಿಗಳಿಂದ ೨ ಸಾವಿರದ ೬೨೫ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಜೋಳದ ಮೇಲಿನ ಕನಿಷ್ಠ ಬೆಂಬಲ ಬೆಲೆಯನ್ನು ಒಂದು ಸಾವಿರದ ೩೧೦ ರೂಪಾಯಿಗಳಿಂದ ಎರಡು ಸಾವಿರದ ೨೨೫ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಗೋಧಿಯ ಮೇಲಿನ ಬೆಂಬಲ ಬೆಲೆ ಒಂದು ಸಾವಿರದ ೪೦೦ ರೂ.ಗಳಿಂದ ಎರಡು ಸಾವಿರದ ೨೭೫ ರೂಪಾಯಿಗೆ ಏರಿಸಲಾಗಿದೆ ಎಂದು ಹೇಳಿದರು. ಕೇಂದ್ರ ಸರಕಾರ ರೈತರ ಕಲ್ಯಾಣಕ್ಕೆ ಬದ್ಧವಾಗಿದ್ದು, ರಸಗೊಬ್ಬರಕ್ಕೆ ಒಂದು ಲಕ್ಷದ ೬೮ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಸಬ್ಸಿಡಿ ನೀಡುತ್ತಿದೆ ಎಂದು ತಿಳಿಸಿದರು. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ರೈತರಿಗೆ ಪ್ರತಿ ವರ್ಷ ಏಳು ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಹಣವನ್ನು ನೀಡಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು. ದೇಶದಲ್ಲಿ ೩೦ ಕೋಟಿಗೂ ಹೆಚ್ಚು ಬಳಕೆದಾರರು ಡಿಜಿಲಾಕರ್ ಸೌಲಭ್ಯವನ್ನು ಬಳಸುತ್ತಿದ್ದು, ಸರ್ಕಾರಿ ಏಜೆನ್ಸಿಗಳು ೬೭೫ ಕೋಟಿ ಇ-ದಾಖಲೆಗಳನ್ನು ನೀಡಿವೆ ಎಂದು ರಾಜ್ಯಸಭೆಯಲ್ಲಿ ಮಾಹಿತಿ ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಜಿತಿನ್ ಪ್ರಸಾದ್ ಲಿಖಿತ ಉತ್ತರ ಮೂಲಕ ತಿಳಿಸಿದ್ದಾರೆ.

<><*<><>*><>

ನವದೆಹಲಿಯಲ್ಲಿ ನಾಳೆ ರಾಷ್ಟ್ರಪತಿ ಭವನದ ಸಾಂಸ್ಕೃತಿಕ ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನೀತಿ ಆಯೋಗದ ಆಡಳಿತ ಮಂಡಳಿಯ ೯ನೇ ಸಭೆ ನಡೆಯಲಿದೆ. ವಿಕಸಿತ ಭಾರತ- ೨೦೨೪ ಈ ವರ್ಷದ ಘೋಷವಾಕ್ಯವಾಗಿದೆ. ಈ ಬಾರಿ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಗುರಿ ಹೊಂದಲಾಗಿದ್ದು ಮುನ್ನೋಟ ದಾಖಲೆ ವಿಧಾನದ ಕುರಿತು

ಸಭೆಯಲ್ಲಿ ಚರ್ಚಿಸಲು ನಿರ್ಧರಿಸಲಾಗಿದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿಗಳು ಮತ್ತು ಲೆಫ್ಟಿನೆಂಟ್ ಗವರ್ನರ್‌ಗಳು, ಕೇಂದ್ರ ಸಚಿವರು ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಕರ್ನಾಟಕ ಈ ಸಭೆಯಲ್ಲಿ ಭಾಗವಹಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

<><*<><>*><>

ಕರ್ನಾಟಕದ ಮಹರ್ಷಿ ವಾಲ್ಮೀಕಿ ನಿಗಮದ ಹಗರಣದ ಆರೋಪ ರಾಜ್ಯಸಭೆಯಲ್ಲಿ ಇಂದು ಪ್ರತಿಧ್ವನಿಸಿತು. ಸದನದ ಎಲ್ಲ ನಿಗದಿತ ಚರ್ಚೆಗಳನ್ನು ಅಮಾನತು ಮಾಡಿ ನಿಯಮ ೨೬೭ರ ಅಡಿ ಚರ್ಚೆಗೆ ಆಡಳಿತಾರೂಢ ಬಿಜೆಪಿ ಪಕ್ಷದ ಸದಸ್ಯರು ಒತ್ತಾಯಿಸಿದರು. ಅವಕಾಶ ನಿರಾಕರಿಸಿದ ರಾಜ್ಯಸಭಾಧ್ಯಕ್ಷ ಜಗದೀಪ್ ಧನಕರ್, ಬಿಜೆಪಿ ಸದಸ್ಯರೊಬ್ಬರಿಗೆ ವಿಷಯ ಪ್ರಸ್ತಾಪಿಸಲು ಅವಕಾಶ ನೀಡಿದರು. ರಾಜ್ಯಸಭೆಯಲ್ಲಿ ಬಿಜೆಪಿ ಸದಸ್ಯ ಈರಣ್ಣ ಕಡಾಡಿ ಪ್ರಸ್ತಾಪಿಸಿ ಸಮಗ್ರ ತನಿಖೆ ನಡೆಸಬೇಕೆಂದು ಒತ್ತಾಯಿಸಿದರು. ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಪರಿಶಿಷ್ಟ ಪಂಗಡ ಜನರ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ. ಅನೇಕ ಬ್ಯಾಂಕ್ ಗಳಲ್ಲಿ ಅಕ್ರಮವಾಗಿ ಖಾತೆಗಳನ್ನು ತೆರೆದು ಹಣ ಜಮೆ ಮಾಡಲಾಗಿದೆ ಎಂದು ಆರೋಪಿಸಿದರು.

<><*<><>*><>

ವಾಲ್ಮೀಕಿ ಹಗರಣ ಮತ್ತು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ- ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಮುಖ್ಯಮಂತ್ರಿ ಸಿದ್ಧರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ರಾಜ್ಯದ ಬಿಜೆಪಿ ಸಂಸದರು ನವದೆಹಲಿಯಲ್ಲಿ ಸಂಸತ್ತಿನ ಹೊರಗೆ ಧರಣಿ ನಡೆಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ, ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಈ ಹಗರಣದಲ್ಲಿ ನೇರವಾಗಿ ಭಾಗಿಯಾಗಿದ್ದಾರೆ ಎಂದು ಆರೋಪಿಸಿದ್ದಾರೆ. ಈ ಪ್ರಕರಣವನ್ನ ಸಿಬಿಐ ತನಿಖೆಗೆ ವಹಿಸಬೇಕು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

<><*<><>*><>

ಅಸ್ಸಾಂನ ಮೊಯಿಡಮ್ಸ್ ಯೂನೆಸ್ಕೊ ವಿಶ್ವ ಪರಂಪರೆಯ ತಾಣವಾಗಿ ಆಯ್ಕೆಯಾಗಿದೆ. ಸುಮಾರು ಏಳುನೂರು ವರ್ಷಗಳಷ್ಟು ಹಳೆಯದಾದ, ಮೊಯಿಡಮ್ಸ್ ಇಟ್ಟಿಗೆ, ಕಲ್ಲಿನ ನಿರ್ಮಿತ ಕಮಾನುಗಳಾಗಿದ್ದು ರಾಜರು ಮತ್ತು ರಾಜಮನೆತನದ ಅವಶೇಷಗಳನ್ನು ಒಳಗೊಂಡಿವೆ. ಹೊಸದಿಲ್ಲಿಯಲ್ಲಿ ನಡೆದ ವಿಶ್ವ ಪರಂಪರೆ ಸಮಿತಿ ಸಭೆಯು ಮೊಯಿಡಮ್ಸ್ ಸೇರ್ಪಡೆಯನ್ನು ಸರ್ವಾನುಮತದಿಂದ ನಿರ್ಧರಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ಈಶಾನ್ಯ ರಾಜ್ಯಗಳಲ್ಲಿ ಇಂತಹ ಮನ್ನಣೆಗಳಿಸಿದ ಮೊದಲ ತಾಣವಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

<><*<><>*><>

ಇಂದು ಕಾರ್ಗಿಲ್ ವಿಜಯ ದಿವಸ. ಪಾಕಿಸ್ತಾನ ವಿರುದ್ಧದ ಕಾರ್ಗಿಲ್ ಯುದ್ಧದಲ್ಲಿ ಭಾರತ ವಿಜಯಿಯಾದ ೨೫ನೇ ವರ್ಷಾಚರಣೆ. ಇದರ ಅಂಗವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಲಡಾಖ್‌ನ ದ್ರಾಸ್‌ನಲ್ಲಿರುವ ಕಾರ್ಗಿಲ್ ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿ, ಕಾರ್ಗಿಲ್ ಯುದ್ಧದಲ್ಲಿ

ಬಲಿದಾನಗೈದ ವೀರ ಯೋಧರಿಗೆ ಗೌರವ ನಮನ ಸಲ್ಲಿಸಿದರು. ಇದು ಪ್ರತಿಯೊಬ್ಬ ಭಾರತೀಯನಿಗೂ ಬಹಳ ವಿಶೇಷವಾದ ದಿನವಾಗಿದೆ. ರಾಷ್ಟ್ರವನ್ನು ರಕ್ಷಿಸುವ ಎಲ್ಲರಿಗೂ ಗೌರವ ಸಲ್ಲಿಸುವ ದಿನವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪೋಸ್ಟ್ ಮಾಡಿದ್ದಾರೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ಶಿಂಕುನ್ ಲಾ ಸುರಂಗ ಮಾರ್ಗ ಯೋಜನೆಗೆ ವರ್ಚುವಲ್ ಮೂಲಕ ಚಾಲನೆ ನೀಡಿದರು. ಈ ಯೋಜನೆಯಡಿ ನಿಮು-ಪದುಮ್-ಡಾರ್ಚಾ ರಸ್ತೆಯಿಂದ ಲೇಹ್‌ಗೆ ಎಲ್ಲಾ ಹವಾಮಾನಗಳಲ್ಲೂ ಸಂಪರ್ಕ ಕಲ್ಪಿಸಲು ಸುಮಾರು ೧೫ ಸಾವಿರದ ೮೦೦ ಅಡಿ ಎತ್ತರದಲ್ಲಿ ೪.೧ ಕಿಲೋಮೀಟರ್ ಉದ್ದದ ಜೋಡಿ ಸುರಂಗ ಮಾರ್ಗವನ್ನು ನಿರ್ಮಿಸಲಾಗುವುದು. ಈ ಕಾರ್ಯ ಪೂರ್ಣಗೊಂಡ ನಂತರ ವಿಶ್ವದಲ್ಲೇ ಇದು ಅತಿ ಎತ್ತರದ ಸುರಂಗ ಮಾರ್ಗವಾಗಲಿದೆ. ಕಾರ್ಗಿಲ್ ವಿಜಯ್ ದಿವಸ್ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಗೃಹ ಸಚಿವ ಅಮಿತ್ ಶಾ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸೇರಿದಂತೆ ಅನೇಕ ಗಣ್ಯರು ಕಾರ್ಗಿಲ್ ಯುದ್ಧದಲ್ಲಿ ಹೋರಾಡಿದ ವೀರ ಯೋಧರಿಗೆ ಗೌರವ ಸಲ್ಲಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಲ್ಲಿ ರಕ್ಷಣಾ ವಲಯದಲ್ಲಿ ಭಾರತ ಸ್ವಾವಲಂಬಿಯಾಗುವತ್ತ ದಾಪುಗಾಲು ಇಡುತ್ತಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ರಕ್ಷಣಾ ವಲಯಕ್ಕೆ ಅಗತ್ಯವಿರುವ ಉಪಕರಣಗಳ ಪೈಕಿ ಶೇಕಡಾ ೭೦ ರಷ್ಟು ಉತ್ಪನ್ನಗಳು ದೇಶದಲ್ಲೇ ತಯಾರಾಗುತ್ತಿವೆ. ವಿಶ್ವದ ೮೦ ರಾಷ್ಟ್ರಗಳಿಗೆ ರಕ್ಷಣಾ ಉಪಕರಣಗಳನ್ನು ಭಾರತ ರಫ್ತು ಮಾಡುತ್ತಿದೆ ಇದುವರೆಗೂ ೨೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಉಪಕರಣಗಳನ್ನು ರಫ್ತು ಮಾಡಲಾಗಿದೆ ಎಂದರು.

<><*<><>*><>

ಭಾರತ ಮತ್ತು ಅಮೆರಿಕ ಇಂದು ಮೊದಲ ಸಾಂಸ್ಕೃತಿಕ ಆಸ್ತಿ ಒಪ್ಪಂದಕ್ಕೆ ಸಹಿ ಹಾಕಿವೆ. ಒಪ್ಪಂದದ ಅಡಿಯಲ್ಲಿ ಪುರಾತತ್ವ ಮತ್ತು ಉಭಯ ದೇಶಗಳ ನಡುವಿನ ಅಕ್ರಮ ವ್ಯವಹಾರ, ಆಮದು, ರಫ್ತು ಮತ್ತು ಕಳ್ಳಸಾಗಣೆ ತಡೆಯಲು, ಹಾಗೂ ನಿಷೇಧಿಸಲು ಸಹಕಾರಿಯಾಗಲಿದೆ. ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಈ ಒಪ್ಪಂದ ಐತಿಹಾಸಿಕ ಎಂದು ಬಣ್ಣಿಸಿದರು. ಅಕ್ರಮವಾಗಿ ಸ್ವಾಧೀನ ಪಡಿಸಿಕೊಂಡಿರುವ ಕಲಾಕೃತಿಯ ವಾಪಾಸಾತಿಯು ಸಮುದಾಯಗಳಿಗೆ ಸ್ವಾಯತ್ತತೆ ಹಾಗೂ ಪರಂಪರೆಯನ್ನು ಮರುಪಡೆಯಲು ಮತ್ತು ರಕ್ಷಿಸುವ ಹಕ್ಕನ್ನು ನೀಡಲಿದೆ ಎಂದರು.

<><*<><>*><>

ಜಗತ್ತಿನ ಕ್ರೀಡಾಪ್ರೇಮಿಗಳಿಗೆ ರಸದೌತಣ ನೀಡುವ ಪ್ಯಾರಿಸ್ ಒಲಿಂಪಿಕ್ಸ್‌ನ ಉದ್ಘಾಟನಾ ಸಮಾರಂಭ ಇಂದು ನಡೆಯಲಿದೆ. ಸೀನ್ ನದಿಯ ಮೇಲೆ ಇಂದು ಭಾರತೀಯ ಕಾಲಮಾನ ರಾತ್ರಿ ೧೧ ಗಂಟೆಗೆ ಉದ್ಘಾಟನಾ ಸಮಾರಂಭ ಜರುಗಲಿದೆ. ಪರೇಡ್‌ನಲ್ಲಿ ಭಾರತದ ಧ್ವಜಧಾರಿಗಳಾದ ಶರತ್ ಕಮಲ್ ಮತ್ತು ಪಿ.ವಿ.ಸಿಂಧು ಭಾರತೀಯ ನಿಯೋಗದ ನೇತೃತ್ವ ಪ್ರತಿನಿಧಿಸಲಿದ್ದಾರೆ. ಒಲಿಂಪಿಕ್ಸ್‌ನಲ್ಲಿ ಭಾರತದ ೧೧೭ ಕ್ರೀಡಾಪಟುಗಳು ಭಾಗವಹಿಸಿದ್ದಾರೆ. ಈ ಪೈಕಿ ಕರ್ನಾಟಕದ ೯ ಕ್ರೀಡಾಳುಗಳು ಸ್ಪರ್ಧಿಸುತ್ತಿದ್ದಾರೆ. ದೇಶವನ್ನು ಪ್ರತಿನಿಧಿಸುತ್ತಿರುವ ಕ್ರೀಡಾಪಟುಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಶುಭ ಹಾರೈಸಿದ್ದಾರೆ. ಪ್ಯಾರಿಸ್

ಒಲಿಂಪಿಕ್ಸ್‌ನಲ್ಲಿ ಒಟ್ಟಾರೆ ೨೦೬ ದೇಶಗಳ ೧೦ ಸಾವಿರದ ೫೦೦ ಕ್ರೀಡಾಪಟುಗಳು ಭಾಗವಹಿಸುತ್ತಿದ್ದಾರೆ. ಉದ್ಘಾಟನಾ ಸಮಾರಂಭಕ್ಕೂ ಮುನ್ನ ಕೆಲ ಪಂದ್ಯಗಳಿಗೆ ಚಾಲನೆ ನೀಡಲಾಗಿದ್ದು, ಅದರಂತೆ ಕಳೆದ ಬುಧವಾರವೇ ಫುಟ್‌ಬಾಲ್ ಮತ್ತು ರಗ್ಬಿ ಪಂದ್ಯಗಳು ಆರಂಭವಾಗಿದೆ. ಬಿಲ್ಲುಗಾರಿಕೆಯ ಶ್ರೇಯಾಂಕದ ಸುತ್ತಿನಲ್ಲಿ ಅಂಕಿತಾ ಭಕತ್, ಭಜನ್ ಕೌರ್ ಮತ್ತು ದೀಪಿಕಾ ಕುಮಾರಿ ಅವರನ್ನೊಳಗೊಂಡ ಭಾರತೀಯ ಮಹಿಳಾ ತಂಡ, ೧ ಸಾವಿರದ ೯೮೩ ಅಂಕಗಳೊಂದಿಗೆ ನಾಲ್ಕನೇ ಸ್ಥಾನ ಗಳಿಸಿ, ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದೆ.

<><*<><>*><>

ಶ್ರೀಲಂಕಾದ ದಂಬುಲ್ಲಾದಲ್ಲಿ ನಡೆದ ಟಿ-೨೦ ಪಂದ್ಯದ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಬಾಂಗ್ಲಾದೇಶವನ್ನು ಹತ್ತು ವಿಕೆಟ್‌ಗಳಿಂದ ಸೋಲಿಸುವ ಮೂಲಕ ಭಾರತದ ವನಿತೆಯರು ಮಹಿಳಾ ಏಷ್ಯಾ ಕಪ್‌ನ ಫೈನಲ್ ಪ್ರವೇಶಿಸಿದ್ದಾರೆ. ೮೧ ರನ್‌ಗಳ ಗುರಿ ಬೆನ್ನತ್ತಿದ ಹಾಲಿ ಚಾಂಪಿಯನ್ ಭಾರತ ಇನ್ನೂ ೫೪ ಎಸೆತಗಳು ಬಾಕಿ ಇರುವಂತೆಯೇ ಗೆಲುವು ಸಾಧಿಸಿದೆ. ಆರಂಭಿಕ ಆಟಗಾರರಾದ ಸ್ಮೃತಿ ಮಂಧಾನ ೩೯ ಎಸೆತಗಳಲ್ಲಿ ೫೫ ರನ್ ಗಳಿಸಿದರೆ, ಶಫಾಲಿ ವರ್ಮಾ ೨೮ ಎಸೆತಗಳಲ್ಲಿ ೨೬ ರನ್ ಗಳಿಸಿದರು. ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಪಾಕಿಸ್ತಾನ ಆತಿಥೇಯ ಶ್ರೀಲಂಕಾ ವಿರುದ್ಧ ಸೆಣಸಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ಕ್ಕೆ <>*><>**